# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಟಿ.ನರಸೀಪುರ ತಾಲ್ಲೂಕಿನ ಚಂದಹಳ್ಳಿ ಏತ ನೀರಾವರಿ ಯೋಜನೆಯ ಪುನರುಜ್ಜೀವನಗೊಳಿಸುವ ಕಾಮಗಾರಿಯ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

***ಓದಲಾಗಿದೆ :-***

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-1/AE-4a/ಕೆಸಿಡಿಟಿ-96/2017-18/2130, ದಿನಾಂಕ:07/14-09-2017 ಮತ್ತು ಪತ್ರ ಸಂಖ್ಯೆ:3516, ದಿನಾಂಕ:17/19-01-2018.

***ಪ್ರಸ್ತಾವನೆ :-***

ಮೇಲೆ ಓದಲಾದ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಚಂದಹಳ್ಳಿ ಏತ ನೀರಾವರಿ ಯೋಜನೆಯನ್ನು 1972 ರಲ್ಲಿ ನಿರ್ಮಿಸಲಾಗಿದ್ದು, ಈ ಯೋಜನೆಯಿಂದ ಸುಮಾರು 4000 ಎಕರೆ ಅರೆ ನೀರಾವರಿ ಬೆಳೆಗಳಿಗೆ ನೀರು ಸರಬರಾಜು ಮಾಡಲಾಗಿತ್ತು, ನಂತರ 1985-86 ರಲ್ಲಿ ಕಬಿನಿ ಯೋಜನೆಯ ಕಬಿನಿ ಬಲದಂಡೆ ನಾಲೆ ನಿರ್ಮಾಣವಾದಾಗ ಸದರಿ ಏತ ನೀರಾವರಿ ಯೋಜನೆಯ ಸುಮಾರು 3638 ಎಕರೆಯಷ್ಟು ಅಚ್ಚುಕಟ್ಟು ಪ್ರದೇಶವು ಸುಜ್ಜಲೂರು ಉಪನಾಲೆ (ಡಿ-36) ಯಲ್ಲಿ ಸೇಪಡೆಯಾಗಿರುತ್ತದೆ ಹಾಗೂ ಪ್ರಸ್ತುತ ಸದರಿ ಯೋಜನೆ ಬಹಳ ವರ್ಷಗಳ ಹಿಂದೆ ನಿರ್ಮಿಸಿದ್ದರಿಂದ ನಿಷ್ಕ್ರಿಯೆಗೊಂಡಿರುತ್ತದೆ ಎಂದು ವರದಿ ಮಾಡಿರುತ್ತಾರೆ.

2. ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲ್ಲೂಕಿನ ಚಂದಹಳ್ಳಿ ಏತ ನೀರಾವರಿ ಯೋಜನೆಯಿಂದ ಸೌಲಭ್ಯ ಪಡೆಯುತ್ತಿದ್ದ, ಹಾಲಿ ನೀರಾವರಿಯಾಗದೇ ಉಳಿದಿರುವ ಸುಮಾರು 362 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರನ್ನು ಒದಗಿಸಲು ನಿಷ್ಕ್ರಿಯೆಗೊಂಡಿರುವ ಸದರಿ ಯೋಜನೆಯನ್ನು ಪುನರುಜ್ಜೀವನಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನವನ್ನು ನೀಡಲು ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಕೋರಿದ್ದರ ಹಿನ್ನೆಲೆಯಲ್ಲಿ, ಚಂದಹಳ್ಳಿ ಏತ ನೀರಾವರಿ ಯೋಜನೆಯ ಪುನರುಜ್ಜೀವನಗೊಳಿಸುವ ಕಾಮಗಾರಿಯ ಡಿ.ಪಿ.ಆರ್ ಅನ್ನು ರೂ.3.00 ಕೋಟಿಗೆ ತಯಾರಿಸಿ ದಿನಾಂಕ:08-07-2017 ರಂದು ನಡೆದ ನಿಗಮ ಮಂಡಳಿಯ 59 ನೇ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು, ಸದರಿ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಇವರು ಕೋರಿರುತ್ತಾರೆ.

3. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರಿ ಆದೇಶ ಸಂಖ್ಯೆ : ಜಸಂಇ 67 ಎಂಎಂಕೆ 2017,
## ಬೆಂಗಳೂರು, ದಿನಾಂಕ : 06-11-2019

ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲ್ಲೂಕಿನ ಚಂದಹಳ್ಳಿ ಏತ ನೀರಾವರಿ ಯೋಜನೆಯ ಪುನರುಜ್ಜೀವನಗೊಳಿಸುವ ಕಾಮಗಾರಿಯ ರೂ.3.00 ಕೋಟಿ (ರೂಪಾಯಿ ಮೂರು ಕೋಟಿಗಳು ಮಾತ್ರ) ಗಳ ಮೊತ್ತದ ಯೋಜನಾ ವರದಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಸದರಿ ಯೋಜನೆಗೆ ಅಗತ್ಯವಿರುವ 0.025 ಟಿ.ಎಂ.ಸಿ. ನೀರಿನ ಪ್ರಮಾಣವನ್ನು ಕಾವೇರಿ ಕಣಿವೆಯಲ್ಲಿ ರಾಜ್ಯಕ್ಕೆ ಹಂಚಿಕೆಯಾಗಿರುವ ಒಟ್ಟಾರೆ 284.75 ಟಿ.ಎಂ.ಸಿ. ನೀರಿನ ಪ್ರಮಾಣದಲ್ಲಿ ಪರಿಗಣಿಸಿ, ಅಗತ್ಯ ಹಂಚಿಕೆಯನ್ನು ಮಾಡಿಕೊಳ್ಳತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:FD 04 TFP 2018, ದಿನಾಂಕ:08-01-2019, ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಮೈಸೂರು.
4. ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.